ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭಾ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE :

# ರಮೇಶ್ ಕುಮಾರ್ ಗೋಲ್ಮಾಲ್ ತನಿಖೆ ನಡೆಸಿ: ವೆಂಕಟಶಿವಾರೆಡ್ಡಿ

## ಕೊಲೆ, ಅವ್ಯವಹಾರ, ಒತ್ತುವರಿ ಕೇಸಿನಲ್ಲಿ ಭಾಗಿಯಾಗಿದ್ದಾರೆ: ಆರೋಪ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 9/11/12

ವಿಧಾನಸಭೆಯಲ್ಲಿ ತಾನು ಬಡವ ಎಂದು ಹೇಳಿಕೊಂಡಿರುವ ಮಾಜಿ ಸಭಾಧ್ಯಕ್ಷ ಹಾಗೂ ಶಾಸಕ ರಮೇಶ್ ಕುಮಾರ್ ರಾಜ್ಯದ ಅತ್ಯಂತ ಶ್ರೀಮಂತ ರಾಜಕಾರಣಿಗಳಲ್ಲೊಬ್ಬರು. ಅವರು ನಡೆಸಿರುವ ಅವ್ಯವಹಾರ, ಅರಣ್ಯ ಭೂಮಿ ಒತ್ತುವರಿ, ಭಾಗಿಯಾಗಿರುವ ಕೊಲೆ ಪ್ರಕರಣಗಳ ಬಗ್ಗೆ ರಾಜ್ಯ ಸರ್ಕಾರವು ಸಿಬಿಐ ತನಿಖೆಗೆ ಒಳಪಡಿಸಬೇಕು ಎಂದು ಜೆಡಿಎಸ್‌ನ ಮಾಜಿ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಆಗ್ರಹಿಸಿದ್ದಾರೆ.

ಶುಕ್ರವಾರ ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಅರಣ್ಯ ಭೂಮಿಯನ್ನು ಕಾನೂನುಬಾಹಿರವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ. ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿಕೊಂಡಿಲ್ಲ ಎಂದಾದರೆ ನಾನು ರಾಜಕೀಯ ನಿವೃತ್ತಿ ಪಡೆದುಕೊಳ್ಳುತ್ತೇವೆ ಎಂದು ಸವಾಲು ಹಾಕಿದರು.

ಕಾಂಗ್ರೆಸ್ ಸರ್ಕಾರದ ಆಡಳಿತಾವಧಿಯಲ್ಲಿ ಆರೋಗ್ಯ ಸಚಿವರಾಗಿದ್ದ ವೇಳೆ ಸರ್ಕಾರಿ ಆಸ್ಪತ್ರೆಯಲ್ಲಿ ಬಡರೋಗಿಗಳಿಗೆ ಒದಗಿಸಲು ಖರೀದಿಸಿರುವ ಔಷಧಿ, ಆ್ಯಂಬುಲೆನ್ಸ್ ಇತ್ಯಾದಿ ಸೇರಿದಂತೆ 535 ಕೋಟಿ ರು. ಅವ್ಯವಹಾರ ನಡೆದಿದೆ ಎಂದು ಮಹಾಲೆಕ್ಕ ಪರಿಶೋಧಕರ ವರದಿಯಲ್ಲಿ ತಿಳಿಸಲಾಗಿದೆ. ಸಿಎಜಿ ವರದಿಯನ್ನು ಶಾಸಕಾಂಗದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ ಪರಿಶೀಲನೆ ಮಾಡಬೇಕು. ಆದರೆ, ವರದಿಯು ಸಮಿತಿ ಮುಂದೆ ಈವರೆಗೂ ಮಂಡನೆಯಾಗದಂತೆ ನೋಡಿಕೊಂಡಿದ್ದಾರೆ ಎಂದು ದೂರಿದರು.